ತಾರೀಖು 18ನೆ ಫೆಬ್ರವರಿ 1907.

ನಂ. 7188 – ಸ್ಯಾನಿಟೆರಿ 170–06–2, ಮೈಸೂರು ಡಿಸ್ಟ್ರಿಕ್ಟು ನಾಗಮಂಗಲ ತಾಲ್ಲೂಕಿನ ಚುಂಚನಗಿರಿ ಗ್ರಾಮಕ್ಕೆ ಶ್ರೀಗಂಗಾಧರೇಶ್ವರ ಸ್ವಾಮಿಯವರ ಜಾತ್ರೆ ಕಾಲದಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶ ಕೊಟ್ಟರೆ ಅಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀಮನ್ ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡುಬಂದಿರುವುದರಿಂದ—

1897ನೆಯ ವರ್ಷದ 2ನೆಯ ನಂಬರ್ ಎಪಿಡೆಮಿಕ್ ಡಿಸೀಸಸ್ ರೆಗ್ಯುಲೇಷನೆಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಮೈಸೂರು ಶ್ರೀಮನ್ ಮಹಾರಾಜರವರ ಸರ್ಕಾರದವರು 1907ನೆಯ ವರ್ಷದ ಫೆಬ್ರವರಿ 24ನೆ ತಾರೀಖಿನಿಂದ 1907ನೆ ಮಾರ್ಚಿ 4ನೆ ತಾರೀಖಿನ ವರೆಗೆ (ಉಭಯ ದಿನಗಳೂ ಸೇರಿ) ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಅಲ್ಲಿಗೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್‌ನಾಮೆಗೆ ವಿರೋಧವಾಗಿ ಮೇಲ್ಕಂಡ ಜಾತ್ರೆಗೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.

ತಾರೀಖು 20ನೆ ಫೆಬ್ರವರಿ 1907.

ನಂ. 7209–ಸ್ಯಾ. 150–06–4, ಬೆಂಗಳೂರು ಡಿಸ್ಟ್ರಿಕ್ಟಿನಲ್ಲಿರುವ ಇದರಡಿ ನಮೂದಿಸಿರುವ ಸ್ಥಳಗಳಿಗೆ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬಂದೊಂದರ ಪಕ್ಕದಲ್ಲಿಯೂ ನಮೂದಿಸಿರುವ ಜಾತ್ರೆ ಮೊದಲಾದ ಕಾಲಗಳಲ್ಲಿ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶಕೊಟ್ಟರೆ ಆ ಸ್ಥಳಗಳಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀಮನ್ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡುಬಂದಿರುವುದರಿಂದ :—

ಜಾತ್ರೆಯ ಹೆಸರು.	ನಡೆಯುವ ಸ್ಥಳ.	ತಾಲ್ಲೂಕು.	ತಾರೀಖು	
			ಇಂದ	ಗೆ
1. ಶ್ರೀ ನರಸಿಂಹಸ್ವಾಮಿಯವರ ಜಾತ್ರೆ.	ಸುಗ್ಗನಹಳ್ಳಿ	ಮಾಗಡಿ	28—2—07	6—3—07
2. ಶ್ರೀ ರಂಗನಾಥಸ್ವಾಮಿಯವರ ಜಾತ್ರೆ	ತಿರುಮಲೆ	ಡಿಟೋ	29—3—07	6—4—07

1897ನೆಯ ವರ್ಷದ 2ನೆಯ ನಂಬರ್ ಎಪಿಡೆಮಿಕ್ ಡಿಸೀಸಸ್ ರೆಗ್ಯುಲೇಷನೆಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಶ್ರೀಮನ್ ಮಹಾರಾಜರವರ ಸರ್ಕಾರದವರು ಪ್ರತಿ ಬಂದು ಜಾತ್ರೆಯ ಪಕ್ಕದಲ್ಲಿಯೂ ನಮೂದಿಸಿರುವ ತಾರೀಖುಗಳಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಆ ಜಾತ್ರೆಯ ಸ್ಥಳಕ್ಕೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್‌ನಾಮೆಗೆ ವಿರೋಧವಾಗಿ ಮೇಲ್ಕಂಡ ಜಾತ್ರೆಗಳಿಗೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.

ತಾರೀಖು 20ನೆ ಫೆಬ್ರವರಿ 1907.

ನಂ. 7224—ಸ್ಯಾನಿಟೆರಿ 170–06–4, ಮೈಸೂರು ಡಿಸ್ಟ್ರಿಕ್ಟು ಶ್ರೀರಂಗಪಟ್ಟಣ ತಾಲ್ಲೂಕಿನ ಕರೀಘಟ್ಟಕ್ಕೆ ಶ್ರೀ ಶ್ರೀನಿವಾಸಸ್ವಾಮಿಯವರ ರಥೋತ್ಸವ ಕಾಲದಲ್ಲಿ ಪ್ಲೇಗು ತಗುಲಿರುವ ಪ್ರದೇಶಗಳಿಂದ ಬರುವ ಜನರು ಅಲ್ಲಿ ಗುಂಪು ಸೇರುವುದಕ್ಕೆ ಅವಕಾಶಕೊಟ್ಟರೆ ಅಲ್ಲಿ ಪ್ಲೇಗು ರೋಗವು ಆರಂಭವಾಗುವ ಅಪಾಯವಿರುವುದಾಗಿ ಮೈಸೂರು ಶ್ರೀಮನ್ ಮಹಾರಾಜರವರ ಸರ್ಕಾರದವರಿಗೆ ತೃಪ್ತಿಕರವಾದ ಕಾರಣಗಳು ಕಂಡುಬಂದಿರುವುದರಿಂದ—

1897ನೆಯ ವರ್ಷದ 2ನೆಯ ನಂಬರ್ ಎಪಿಡೆಮಿಕ್ ಡಿಸೀಸಸ್ ರೆಗ್ಯುಲೇಷನೆಂಬ ಸಾಂಕ್ರಾಮಿಕ ಜಾಡ್ಯಗಳ ಸಂಬಂಧವಾದ ಕಾನೂನಿಂದ ತಮಗೆ ಕೊಡಲ್ಪಟ್ಟಿರುವ ಅಧಿಕಾರಗಳನ್ನು ನಡೆಸುವುದರಲ್ಲಿ ಮೈಸೂರು ಶ್ರೀಮನ್ ಮಹಾರಾಜರವರ ಸರ್ಕಾರದವರು, 1907ನೆ ಮಾರ್ಚಿ 1ನೆ ತಾರೀಖಿನ ದಿನ ಪ್ಲೇಗು ತಗುಲಿರುವ ಪ್ರದೇಶಗಳಿಂದ ಜನರು ಅಲ್ಲಿಗೆ ಬರಕೂಡದೆಂದು ನಿಷೇಧಿಸಿರುತ್ತಾರೆ.

ಈ ಇಸ್ತಿಹಾರ್‌ನಾಮೆಗೆ ವಿರೋಧವಾಗಿ ಮೇಲ್ಕಂಡ ರಥೋತ್ಸವಕ್ಕೆ ಹೋಗುವ ಜನರು ಹಿಂದಕ್ಕೆ ಕಳುಹಿಸಲ್ಪಡುವರು.